



ಅರುಣ ಪಿ. ಭಟ್ಟ

## ವಾರಭವಿಷ್ಯ: 15.07.2021ರಿಂದ 21.07.2021ರವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ ಎಚ್ಚರವಿರಲಿ. ಸಹೋದರ ವಿಶ್ವಾಸಗಳನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ನಿಮ್ಮ ಬಹುಕಾಲದ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿದೆ. ಈ ವಾರ ಸಂತೋಷ ಕೂಟಗಳಿಗೆ ವಿಶೇಷ ಆಮಂತ್ರಣಗಳು ಹೆಚ್ಚಾಗುವ ಸಾಧ್ಯತೆ ಇದೆ. ಶುಭದಿನ 20. ವಿಷ್ಣು ಸಹಸ್ರನಾಮ ಪಠಿಸಿರಿ.

---

ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶಗಳು ಕಂಡುಬರಲಿದೆ. ಹಣಕಾಸು ವ್ಯವಹಾರಗಳು ಯೋಜಿತವಾಗಿ ನಡೆಯಲಿದೆ. ಕಷ್ಟದ ಕಾರ್ಯಗಳನ್ನು ಸಹ ಅನಾಯಾಸವಾಗಿ ನಡೆಯುತ್ತವೆ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ. ಅವಿವಾಹಿತರಿಗೆ ವಿವಾಹದ ಯೋಗ ಸಾಧ್ಯತೆ ಕಾಣಬಹುದಾಗಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಶುಭದಿನ 19. ಹನುಮಾನ್ ಚಾಲೀಸ್ ಪಠಿಸಿರಿ.




---




ಆತ್ಮೀಯ ವ್ಯಕ್ತಿಗಳೊಡನೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟಂತಹ ವ್ಯಾಜ್ಯಗಳಿಂದ ನಿಮ್ಮ ಮನಃಸ್ಥಿತಿ ಹಾಳಾಗಬಹುದು. ಅನಗತ್ಯವಾಗಿ ಮಾತಿನಲ್ಲಿ ಏನಾದರೂ ಹೇಳಿ ಸಿಲುಕಬೇಡಿ. ಕೆಲಸದ ವಿಷಯದಲ್ಲಿ ಸಮಸ್ಯೆಗಳು ಉದ್ಭವವಾಗಲಿದೆ ಆದಷ್ಟು ಸಮಸ್ಯೆಗಳನ್ನು ಆ ಕ್ಷಣದಲ್ಲೇ ಬಗೆಹರಿಸಲು ಪ್ರಯತ್ನಿಸಿ. ಮಾನಸಿಕ ಚೈತನ್ಯಕ್ಕೆ ನೋಡಿಕೊಳ್ಳಿ. ಶುಭದಿನ 18. ಗಣಪತಿಗೆ 108 ದೂರ್ವಾರ್ಚನೆ ಮಾಡಿಸಿರಿ.

---

ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡುಬರುತ್ತದೆ. ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಪ್ರೀತಿಪಾತ್ರರಿಗೆ ಉಡುಗೊರೆ ನೀಡಲಿದ್ದೀರಿ. ಶುಭದಿನ 16. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




---




ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ನಿಮ್ಮ ಪ್ರತಿಯೊಂದು ಕಾರ್ಯಗಳಿಗೂ ತೊಂದರೆ ನೀಡುವ ವ್ಯಕ್ತಿಗಳನ್ನು ಗುರುತಿಸಿ ಆದಷ್ಟು ದೂರವಿಡುವುದು ಒಳ್ಳೆಯದು. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ಸಂಗಾತಿಯ ವಿಚಾರಗಳಿಗೆ ಸಹಮತನೀಡಿ. ಆರ್ಥಿಕ ವಿಷಯದಲ್ಲಿ ಸಂತೃಪ್ತಿಯ ಭಾವನೆ ಮೂಡಲಿದೆ. ಶುಭದಿನ 18. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

---

ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು. ಆರೋಗ್ಯದ ಹಿತದೃಷ್ಟಿಯನ್ನು ಮನಗಾಣಿರಿ. ಹೆಚ್ಚಿನ ಕೆಲಸ ಹಾಗೂ ಹೊಸ ಆದಾಯ ಮಾರ್ಗ ಕಂಡುಬರಲಿದೆ. ಆದಾಯ ಹೆಚ್ಚಳವಾಗಿದ್ದರೂ ಸಹ ಖರ್ಚುಗಳು ವಿಪರೀತ ವಾಗಲಿದೆ, ಅನಪೇಕ್ಷಿತ ಖರ್ಚುಗಳಿಗೆ ಕಡಿವಾಣ ಹಾಕುವುದು ಒಳ್ಳೆಯದು. ಪತ್ನಿಯೊಡನೆ ಉತ್ತಮ ಬಾಂಧವ್ಯ ಇರಲಿದೆ. ಶುಭದಿನ 17. ಆದಿತ್ಯ ಹೃದಯ ಪಠಿಸಿರಿ.




---




ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಆರ್ಥಿಕವಾಗಿ ಬಳಲುವಿಕೆ ಕಂಡುಬರಲಿದೆ. ಸಾಲದ ಸಮಸ್ಯೆಗಳು ಮತ್ತಷ್ಟು ಸಂಕಷ್ಟ ತಂದೊಡ್ಡಲಿವೆ. ವ್ಯವಹಾರದಲ್ಲಿ ಅಲಕ್ಷತನ ಹೆಚ್ಚಾಗಬಹುದು. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕೊರತೆ ಕಾಡಲಿದೆ. ದೈವ ಸಂಕಲ್ಪದ ಮೊರೆಹೋಗುವ ಸಾಧ್ಯತೆ ಕಂಡು ಬರಲಿದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ 20. ಚಂಡಿ ಪಾರಾಯಣ ಮಾಡಿರಿ.

---

ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಆದರೆ ಪರಿಣಾಮಕಾರಿಯಾದ ಕಾರ್ಯ ಅನುಷ್ಠಾನಕ್ಕೆ ಹೆಚ್ಚು ಸಿಬ್ಬಂದಿಯ ಅಗತ್ಯ ಬರುತ್ತದೆ. ಶುಭದಿನ 19. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




---




ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ಕೆಲವು ವ್ಯಕ್ತಿಗಳಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರುತ್ತದೆ. ವ್ಯಾವಹಾರಿಕ ಕ್ಷೇತ್ರದಲ್ಲಿ ಹಿನ್ನಡೆ ಆಗಬಹುದಾದ ಸಾಧ್ಯತೆ ಉಂಟು. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಶುಭದಿನ 18. ಕಾಲಭೈರವನ ಸೇವೆ ಮಾಡಿರಿ.

---

ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಕೆಲವು ಅದೃಷ್ಟದ ಭಾಗ್ಯಗಳು ಒದಗಿಬರಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗಿ ಆಗುವ ಸಾಧ್ಯತೆ ಇದೆ. ಅಲರ್ಜಿ ಸೋಂಕು ಕಾಡುವ ಸಾಧ್ಯತೆ ಇದ್ದು, ಆರೋಗ್ಯ ಕ್ಷೀಣಿಸಬಹುದು. ಶುಭದಿನ 21. ಸೌಂದರ್ಯ ಲಹರಿ ಪಠಿಸಿರಿ.




---




ಅಪರಿಚಿತ ವ್ಯಕ್ತಿಗಳಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ನಂಬಿಸಿ ದ್ರೋಹ ಮಾಡುವವರ ಬಗ್ಗೆ ಎಚ್ಚರದಿಂದಿರಿ. ವಾಹನದಲ್ಲಿ ಜಾಗ್ರತೆ ವಹಿಸುವುದು ಸೂಕ್ತ. ಪತ್ನಿಯೊಡನೆ ಅತಿ ಹೆಚ್ಚು ಕೋಪ ಕಲಹಗಳಲ್ಲಿ ಪಾಲ್ಗೊಳ್ಳಬೇಡಿ. ನಿಮ್ಮ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯಕವಾಗಿ ಬೇಕಾಗಿದೆ. ಹಣಕಾಸಿನ ವಿಷಯದಲ್ಲಿ ಉತ್ತಮ ರೀತಿಯ ವ್ಯವಹಾರ ಕಾಣಬಹುದು. ಶುಭದಿನ 18. ಕನಕಧಾರಾ ಸ್ತೋತ್ರ ಪಠಿಸಿರಿ.

---

ಯೋಜನೆಗಳ ಫಲಿತಾಂಶ ವಿಳಂಬವಾಗುವ ಸಾಧ್ಯತೆ ಇದೆ. ಕಲಿಕೆಯ ವಿಷಯಾಸಕ್ತಿ ತುಂಬಾ ಉತ್ತಮ ಮಟ್ಟದಲ್ಲಿ ಇರಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ಆರ್ಥಿಕ ಸ್ಥಿತಿ ಮಧ್ಯಮ ಗತಿಯಲ್ಲಿ ನಡೆಯಲಿದೆ. ಪರಸ್ಥಳ ವಾಸ ಅನುಭವಿಸಬೇಕಾದ ಸಂದರ್ಭ ಒದಗಿ ಬರಬಹುದು. ಕೌಟುಂಬಿಕ ಜೀವನ ಆರಾಮವಾಗಿರುತ್ತದೆ. ಶುಭದಿನ 20. ಚಂಡಿ ಪಾರಾಯಣ ಮಾಡಿರಿ.

